ರಸ್ತೆ ಅಪಘಾತಗಳನ್ನು ತಡೆಗಟ್ಟುವುದು

204(145); ಶ್ರೀ ಮೋಹಿಯುದ್ದಿನ್ ಬಾವಾ ಬಿ.ಎ. (ಮಂಗಳೂರು ನಗರ ಉತ್ತರ)

ಅ) ರಾಜ್ಯದಲ್ಲಿ ಹೆದ್ದಾರಿ ಹಾಗೂ ರಸ್ತೆ ನಿರ್ವಹಣೆ ಮತ್ತು ಸಂಶೋಧನೆಗೆ ಸಂಬಂಧಿಸಿದಂತೆ ನಿಗಾವಹಿಸಲು ಸರ್ಕಾರ ಯಾವುದಾದರು ಸಂಸ್ಥೆ ಸ್ಥಾಪಿಸಿದೆಯೇ;

ಆ) ಹಾಗಿದ್ದಲ್ಲಿ, ನಿರಂತರವಾಗಿ ನಡೆಯುತ್ತಿರುವ ರಸ್ತೆ ಅಪಘಾತಗಳನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ (ವಿವರ ನೀಡುವುದು)?

ಶ್ರೀ ರಾಮಲಿಂಗಾರೆಡ್ಡಿ (ಮಾನ್ಯ ಸಾರಿಗೆ ಸಚಿವರು)

ಅ) ರಾಜ್ಯದಲ್ಲಿ ಹೆದ್ದಾರಿ ಹಾಗೂ ರಸ್ತೆ ನಿರ್ವಹಣೆ ಮತ್ತು ಸಂಶೋಧನೆಗೆ ನಿಗಾವಹಿಸಲು ಸರ್ಕಾರವು ಯೋಜನಾ ಮತ್ತು ರಸ್ತೆ ಆಸ್ತಿ ನಿರ್ವಹಣೆ ಕೇಂದ್ರ (PRAMC) ವನ್ನು ಲೋಕೋಪಯೋಗಿ ಇಲಾಖೆ ಅಡಿಯಲ್ಲಿ ಸ್ಥಾಪಿಸಲಾಗಿದೆ.

ಆ) ಸಾರಿಗೆ ಇಲಾಖೆಯು ನಿರಂತರವಾಗಿ ನಡೆಯುತ್ತಿರುವ ರಸ್ತೆ ಅಪಘಾತಗಳನ್ನು ತಡೆಗಟ್ಟಲು ಮತ್ತು ರಸ್ತೆ ಸುರಕ್ಷತೆ, ಸಾರ್ವಜನಿಕ ಹಿತದೃಷ್ಟಿಯನ್ನು ಗಮನದಲ್ಲಿರಿಸಿಕೊಂಡು ವಾಹನ ಚಾಲನಾ ಅನುಜ್ಞಾಪತ್ರ ಕೋರುವ ಅಭ್ಯರ್ಥಿಗಳನ್ನು ಖುದ್ದಾಗಿ ವೈಜ್ಞಾನಿಕ ಮತ್ತು ತಾಂತ್ರಿಕಾ ಚಾಲನಾ ಸಾಮರ್ಥ್ಯ ಪರೀಕ್ಷೆಗೊಳಪಡಿಸಿ, ಅರ್ಹತೆ ಹೊಂದಿರುವ ಅಭ್ಯರ್ಥಿಗಳಿಗೆ ಮಾತ್ರ ಡ್ರೈವಿಂಗ್ ಲೈಸೆನ್ಸ್ ನೀಡಲಾಗುತ್ತಿದೆ.

ಪೊಲೀಸ್ ಇಲಾಖೆಯಿಂದ ರಾಜ್ಯಾದ್ಯಂತ (ಜಿಲ್ಲಾವಾರು) ಒಟ್ಟು 3008 ಬ್ಲಾಕ್ ಸ್ಪಾಟ್‌ಗಳನ್ನು ಗುರುತಿಸಿದ್ದು ಇವುಗಳನ್ನು ವೈಜ್ಞಾನಿಕವಾಗಿ ಸರಿಪಡಿಸಲು ಪೊಲೀಸ್ (ಸಂಚಾರ) ಇಲಾಖೆ, ರಾಷ್ಟ್ರೀಯ ಹೆದ್ದಾರಿ

ಪ್ರಾಧಿಕಾರ, NHAI ಮತ್ತು ಲೊಕೋಪಯೋಗಿ ಇಲಾಖೆ, ಇವರುಗಳನ್ನು ಒಳಗೊಂಡಂತೆ ರಾಜ್ಯ ರಸ್ತೆ ಸುರಕ್ಷಾ ಪರಿಷತ್ತಿನ ಪ್ರಥಮ ಸಭೆ ದಿ: 17–12–2013 ರಂದು ಮಾನ್ಯ ಸಾರಿಗೆ ಸಚಿವರ ಅಧ್ಯಕ್ಷತೆಯಲ್ಲಿ ಸಭೆ ನಡೆಸಲಾಗಿದೆ.

ಮೇಲಿನವುಗಳ ಜೊತೆಗೆ ಕೆ–ಶಿಪ್ ವತಿಯಿಂದ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ:

1. Junction improvements
2. Road Markings
3. Passing lanes in hilly areas / Ghat sections.
4. Providing Raised Payment Markers (RPM)
5. Pedestrian crossings
6. Truck lay byes & truck parkings
7. Providing crash barriers
8. Providing raised footpath with guard rails
9. Providing of signboards wherever necessary
10. Providing of rumble strips

ಎಡಿಬಿ ನೆರವಿನಡಿ ಲೋಕೋಪಯೋಗಿ ಇಲಾಖೆ ವತಿಯಿಂದ ರಾಜ್ಯದಲ್ಲಿ 110 ಅಪಘಾತ ಸ್ಥಳ (Blackspot) ಗಳನ್ನು ಬೆಳಗಾವಿ, ಗುಲ್ಬರ್ಗಾ, ಬಿಜಾಪುರ, ಬೀದರ್, ಬಳ್ಳಾರಿ, ರಾಯಚೂರು, ಕೊಪ್ಪಳ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಗುರುತಿಸಲಾಗಿದ್ದು, ಇವುಗಳನ್ನು ಅಂತರರಾಷ್ಟ್ರೀಯ ಸಮಾಲೋಚಕರಾದ M/s Vic Roads, Australia

ರವರು ಪರಿಶೀಲಿಸಿ ನೀಡಿರುವ ವರದಿಯಂತೆ ನಿವಾರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ವಿಶ್ವಬ್ಯಾಂಕ್ ಯೋಜನೆಯಡಿ ರಸ್ತೆ ಸುರಕ್ಷತಾ ಕ್ರಮಗಳನ್ನು ರೂಪಿಸಿ, ಕಾರ್ಯಗತಗೊಳಿಸಲು ಸಾರಿಗೆ, ಆರೋಗ್ಯ, ಶಿಕ್ಷಣ, ಪೊಲೀಸ್ ಹಾಗೂ ಲೋಕೋಪಯೋಗಿ ಇಲಾಖೆಯ ಪಾಲುದಾರಿಕೆಯಲ್ಲಿ ಸಂಚಾರ ಮತ್ತು ರಸ್ತೆ ಸುರಕ್ಷತಾ ಕೋಶ (Traffic & Road Safety Cell) ವನ್ನು ಸ್ಥಾಪಿಸಲಾಗಿದೆ.

ಅನ್ನಭಾಗ್ಯ ಯೋಜನೆ ಫಲಾನುಭವಿಗಳು

205(146); ಶ್ರೀ ಮೋಹಿಯುದ್ದಿನ್ ಬಾವಾ ಬಿ.ಎ. (ಮಂಗಳೂರು ನಗರ ಉತ್ತರ)

ಅ) ಹಸಿವು ಮುಕ್ತ ರಾಜ್ಯ ನಿರ್ಮಾಣದ "ಅನ್ನಭಾಗ್ಯ ಯೋಜನೆಯ"ಯ ಮೂಲಕ ಪ್ರಯೋಜನ ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು (ವಿವರ ನೀಡುವುದು);

ಆ) ಕಾಳಸಂತೆಯಲ್ಲಿ ಪಡಿತರ ಮಾರಾಟ, ನಕಲಿ ಕಾರ್ಡ್‌ಗಳ ಹಾವಳಿಯನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳಾವುವು?

ಶ್ರೀ ದಿನೇಶ್ ಗುಂಡೂರಾವ್ (ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಸಚಿವರು)

ಅ) ಹಸಿವು ಮುಕ್ತ ರಾಜ್ಯ ನಿರ್ಮಾಣದ "ಅನ್ನಭಾಗ್ಯ ಯೋಜನೆಯ"ಯ ಮೂಲಕ ಪ್ರಯೋಜನ ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ: 1,03,40,282 ಆಗಿರುತ್ತದೆ. (ವಿವರ ಲಗತ್ತಿಸಿದೆ)

ಆ) ಕಾಳಸಂತೆಯಲ್ಲಿ ಪಡಿತರ ಮಾರಾಟ, ನಕಲಿ ಕಾರ್ಡ್‌ಗಳ ಹಾವಳಿಯನ್ನು ತಡೆಗಟ್ಟಲು ಸರ್ಕಾರ ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿದೆ:–